# ಇಂದು ಮೇಲ್ಮನೆಗೆ ಚುನಾವಣೆ: ಲಕ್ಷ್ಮಣ ಸವದಿ ಆಯ್ಕೆ ಖಚಿತ

## ಔಪಚಾರಿಕ ಮತದಾನಕ್ಕೆ ವಿಧಾನಸಭಾ ಸಚಿವಾಲಯದಿಂದ ಸಿದ್ಧತೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ವಿಧಾನಸಭೆಯಿಂದ ವಿಧಾನಪರಿಷತ್‌ನ ಒಂದು ಸ್ಥಾನಕ್ಕೆ ಸೋಮವಾರ ಉಪಚುನಾವಣೆ ನಡೆಯಲಿದ್ದು, ವಿಧಾನಸಭಾ ಸಚಿವಾಲಯವು ಸಕಲ ಸಿದ್ಧತೆಯನ್ನು ಕೈಗೊಂಡಿದೆ.

ಬೆಳಗ್ಗೆ 9 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ಮತದಾನ ಪ್ರಕ್ರಿಯೆ ನಡೆಯಲಿದೆ. ಮತಪತ್ರಗಳು, ಗೌಪ್ಯ ಮತದಾನದ ಸ್ಥಳ ನಿಗದಿ ಸೇರಿದಂತೆ ಎಲ್ಲಾ ತಯಾರಿಗಳನ್ನು ಮಾಡಿಕೊಳ್ಳಲಾಗಿದೆ. ವಿಧಾನಸೌಧದ 106 ಸಮಿತಿ ಕೊಠಡಿಯಲ್ಲಿ ಮತದಾನ ನಡೆಯಲಿದೆ. ಗೌಪ್ಯ ಮತದಾನವಾಗಿದ್ದು, ಶಾಸಕರು ಪಾಲ್ಗೊಳ್ಳಲಿದ್ದಾರೆ.

ಅಂತಿಮ ಹಂತದಲ್ಲಿ ಜೆಡಿಎಸ್ ಬೆಂಬಲಿತ ಅಭ್ಯರ್ಥಿ ಅನಿಲ್ ಕುಮಾರ್ ಅಂತಿಮ ಹಂತದಲ್ಲಿ ಕಣದಿಂದ ಹಿಂದೆ ಸರಿದಿದ್ದಾರೆ. ಇದು ಉಪಮುಖ್ಯಮಂತ್ರಿ ಲಕ್ಷ್ಮಣ್ ಸವದಿ ಗೆಲುವಿಗೆ ಇದ್ದ ಅಡ್ಡಿ ದೂರವಂತಾಗಿದೆ. ಉಪ ಚುನಾವಣೆಗೆ ಸ್ಪರ್ಧಿಸಿರುವ ಅಭ್ಯರ್ಥಿಗಳ ಹೆಸರು ಈಗಾಗಲೇ ಅಂತಿಮಗೊಂಡು ಅಧಿಸೂಚನೆಯಾಗಿರುವ ಹಿನ್ನೆಲೆಯಲ್ಲಿ ಅನಿಲ್ ಕುಮಾರ್ ಅಖಾಡದಿಂದ ಹಿಂದೆ ಸರಿದರೂ ಚುನಾವಣೆ ನಡೆಯಲಿದೆ. ಚುನಾವಣಾ ಕಾರ್ಯಕ್ಕಾಗಿ 25ಕ್ಕೂ ಹೆಚ್ಚು ಸಿಬ್ಬಂದಿ ನಿಯೋಜನೆಗೊಂಡಿದ್ದಾರೆ. ಆದರೆ, ಮತದಾನ ಕೊಠಡಿಯಲ್ಲಿ 15 ಸಿಬ್ಬಂದಿ ಮಾತ್ರ ಕಾರ್ಯನಿರ್ವಹಿಸಲಿದ್ದಾರೆ.



**ಬೆಳಗ್ಗೆ 9ರಿಂದ ಸಂಜೆ 4ರವರೆಗೆ ಶಾಸಕರಿಂದ ಮತದಾನ**

**ಜೆಡಿಎಸ್ ಬೆಂಬಲಿತ ಅನಿಲ್ ಕುಮಾರ್ ಕಣದಿಂದ ಹಿಂದಕ್ಕೆ**

**ಬಿಜೆಪಿಯ ಉಪ ಮುಖ್ಯಮಂತ್ರಿ ಲಕ್ಷ್ಮಣ ಸವದಿ ನಿರಾಳ**

**ಬಿಜೆಪಿ ಶಾಸಕರಿಂದ ಮಾತ್ರ ಮತದಾನ**

ಬಿಜೆಪಿ ಶಾಸಕರು ಮಾತ್ರ ಮತ ಚಲಾಯಿಸಲಿದ್ದು, ಅನಿಲ್ ಕುಮಾರ್ ಕಣದಿಂದ ಹಿಂದೆ ಸರಿದಿರುವ ಕಾರಣ ಕಾಂಗ್ರೆಸ್-ಜೆಡಿಎಸ್ ಶಾಸಕರು ಮತದಾನ ಪ್ರಕ್ರಿಯೆಯಿಂದ ದೂರ ಉಳಿದುಕೊಳ್ಳಲಿದ್ದಾರೆ. ಲಕ್ಷ್ಮಣ್ ಸವದಿ ಗೆಲುವು ಖಚಿತವಾಗಿದ್ದು, ಎಷ್ಟು ಮತಗಳು ಬೀಳಲಿವೆ ಎಂಬುದು ಕುತೂಹಲ ಮೂಡಿಸಿದೆ.

ಸಂಜೆ 5 ಗಂಟೆಗೆ ಮತ ಎಣಿಕೆ ಪ್ರಕ್ರಿಯೆ ನಡೆಯಲಿದೆ. ಬಳಿಕವಷ್ಟೇ ಮತದಾನದ ವಿವರ ಲಭ್ಯವಾಗಲಿದೆ. ಸೋಮವಾರ ಬೆಳಗ್ಗೆ 11 ಗಂಟೆಗೆ ಜಂಟಿ ಅಧಿವೇಶನವನ್ನುದ್ದೇಶಿಸಿ ರಾಜ್ಯಪಾಲರು ಭಾಷಣ ಮಾಡಲಿದ್ದಾರೆ. ಇದಕ್ಕೂ ಮುನ್ನ ಬಿಜೆಪಿ ಶಾಸಕರು ಮತ ಚಲಾಯಿಸಲಿದ್ದಾರೆ. ಉಪ ಚುನಾವಣೆಯಲ್ಲಿ ಶಿವಾಜಿನಗರ ವಿಧಾನಸಭಾ ಕ್ಷೇತ್ರದಿಂದ ರಿಜ್ವಾನ್ ಅರ್ಷದ್ ಜಯಗಳಿಸಿದ್ದರಿಂದ ವಿಧಾನಪರಿಷತ್ ಸದಸ್ಯಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ಹೀಗಾಗಿ ಒಂದು ಸ್ಥಾನ ತೆರವುಗೊಂಡಿದ್ದು, ಈ ಸ್ಥಾನಕ್ಕೆ ಇಂದು ಉಪಚುನಾವಣೆ ನಡೆಸಲಾಗುತ್ತಿದೆ.